ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಎಲ್‌ಆರ್‌ಡಿಸಿ/2018-19 /4997

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 04-01-2019.

## -:ಸುತ್ತೋಲೆ:-

ವಿಷಯ: 2018-19 ನೇ ಸಾಲಿನ "42ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ದಲ್ಲಿ ಪಾಲ್ಗೊಳ್ಳಲು ನೋಂದಣಿ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ:1. ದಿನಾಂಕ:04-01-2018 ರಂದು ನಿರ್ದೇಶಕರ ಕೊಠಡಿಯಲ್ಲಿ ನಡೆದ ಕ್ರೀಡಾ ಸಮಿತಿಯ ಸಭೆಯ ನಡವಳಿಗಳು.
2. ಸುತ್ತೋಲೆ ಸಂಖ್ಯೆ: ಡಿಟಿಇ/02/ಎಲ್‌ಆರ್‌ಡಿಸಿ/2018-19 ದಿನಾಂಕ: 13.11.2018.
3. ಸುತ್ತೋಲೆ ಸಂಖ್ಯೆ: ಡಿಟಿಇ/02/ಎಲ್‌ಆರ್‌ಡಿಸಿ/2018-19 ದಿನಾಂಕ: 15.12.2018.

((((()))))

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(3) ರಲ್ಲಿ, 2018-19 ನೇ ಸಾಲಿನ "42 ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ವನ್ನು ದಿನಾಂಕ: 01-02-2019 ರಿಂದ 03-02-2019 ರವರೆಗೆ ಶ್ರೀಮತಿ ಎಲ್ ವಿ ಸರ್ಕಾರಿ ಪಾಲಿಟೆಕ್ನಿಕ್, ಹಾಸನ, ಇಲ್ಲಿ ನಿರ್ದೇಶನಾಲಯದ ಸಹಯೋಗದಲ್ಲಿ ಆಯೋಜಿಸಲಾಗುವುದು ಎಂದು ತಿಳಿಸಿ, ಕ್ರೀಡಾಕೂಟದಲ್ಲಿ ಭಾಗವಹಿಸುವವರು ತಮ್ಮ ತಮ್ಮ ಸಂಸ್ಥೆಗಳಲ್ಲಿ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳನ್ನು ಆಯ್ಕೆಮಾಡಿ, ಬಿಟಿಇ ಲಿಂಕ್ ನಲ್ಲಿ ದಿನಾಂಕ: 15.01.2019 ರ ಸಂಜೆ 4.00 ಗಂಟೆ ಯೊಳಗಾಗಿ ನೊಂದಣಿ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿತ್ತು. ನೊಂದಣಿ ಮಾಡಿಕೊಳ್ಳುವ ಪ್ರಕ್ರಿಯೆ ದಿನಾಂಕ: 18.12.2018 ರಿಂದ ಪ್ರಾರಂಭವಾಗಿದ್ದು ಇಲ್ಲಿಯವರೆಗೂ ಕೆಲವೆ ಸಂಸ್ಥೆಯವರು ಮಾತ್ರ ನೊಂದಣಿ ಮಾಡಿರುವುದು ಕಂಡುಬಂದಿರುತ್ತದೆ, ಇಲ್ಲಿಯವರೆಗು ನೊಂದಣಿ ಮಾಡದಿರುವ ಸಂಸ್ಥೆಯವರು ಬಿಟಿಇ ಲಿಂಕ್ ನಲ್ಲಿ **ದಿನಾಂಕ: 16.01.2019 ರ ಸಂಜೆ 4.00** ಗಂಟೆ ಯೊಳಗಾಗಿ ನೊಂದಣಿ ಮಾಡಿಕೊಳ್ಳಲು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಮತ್ತೊಮ್ಮೆ ಸೂಚಿಸಲಾಗಿದೆ. ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಸಂಸ್ಥೆಯವರು ಖಡ್ಡಾಯವಾಗಿ ಕ್ರೀಡಾಕೂಟದಲ್ಲಿ ಬಾಗವಹಿಸಲು ಸಹ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ/ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಪ್ರಾಂಶುಪಾಲರು, ಶ್ರೀಮತಿ ಎಲ್ ವಿ ಸರ್ಕಾರಿ ಪಾಲಿಟೆಕ್ನಿಕ್, ಹಾಸನ, ಇವರ ಮಾಹಿತಿಗಾಗಿ.
3. ಇ-ಗೌರ್ವನೆನ್ಸ್ ವಿಭಾಗಕ್ಕೆ ಸೂಕ್ತ ಕ್ರಮಕ್ಕಾಗಿ.